ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:		2317
ಮಾನ್ಯ ಸದಸ್ಯರ ಹೆಸರು		ಶ್ರೀ ಬಸವರಾಜ ಪಾಟೀಲ್ ಇಟಗಿ
ಉತ್ತರಿಸುವ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ		29-03-2021
	ಪ್ರಶ್ನೆ	ಉತ್ತರ
(ಅ)	ರಾಯಚೂರು ವಿಶ್ವವಿದ್ಯಾಲಯ ಯಾವಾಗ ಪ್ರಾರಂಭವಾಗಿದೆ;	ರಾಯಚೂರು ವಿಶ್ವವಿದ್ಯಾಲಯವನ್ನು ನೂತನವಾಗಿ ದಿನಾಂಕ:01.08.2020ರಿಂದ ಜಾರಿಗೆ ಬರುವಂತೆ ಸ್ಥಾಪಿಸಲಾಗಿದೆ.
(ಆ)	ಅಸ್ತಿತ್ವಕ್ಕೆ ಬಂದ ನಂತರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು;	ರಾಯಚೂರು ವಿಶ್ವವಿದ್ಯಾನಿಲಯದ ಸ್ಥಾಪನೆಯ ಉದ್ದೇಶಕ್ಕಾಗಿ ರೂ. 220.00ಲಕ್ಷಗಳನ್ನು ಸರ್ಕಾರದ ಆದೇಶ ಸಂಖ್ಯೆ: ಇಡಿ 236 ಯುಜಿವಿ 2016 (ಭಾಗ-2), ದಿನಾಂಕ: 06-03-2019ರನ್ವಯ ಗುಲ್ಬರ್ಗ ವಿಶ್ವವಿದ್ಯಾನಿಲಯದ ಮೂಲಕ ಬಿಡುಗಡೆಗೊಳಿಸಲಾಗಿದೆ. ಮುಂದುವರೆದು ಗುಲ್ಬರ್ಗ ವಿಶ್ವವಿದ್ಯಾನಿಲಯವು ರೂ. 200.00ಲಕ್ಷಗಳನ್ನು 2021ರ ಜನವರಿ ಮಾಹೆಯಲ್ಲಿ ರಾಯಚೂರು ವಿಶ್ವವಿದ್ಯಾನಿಲಯಕ್ಕೆ ವರ್ಗಾವಣೆ ಮಾಡಿರುತ್ತದೆ. 2020-21ನೇ ಸಾಲಿನ ಆಯ-ವ್ಯಯದಲ್ಲಿ ರಾಯಚೂರು ವಿಶ್ವವಿದ್ಯಾಲಯಕ್ಕೆ ಯಾವುದೇ ಅನುದಾನ ಹಂಚಿಕೆಯಾಗಿರುವುದಿಲ್ಲ.
(ಇ)	ವಿಶ್ವವಿದ್ಯಾಲಯದಲ್ಲಿ ಮೂಲ ಸೌಕರ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಈ)	ಬಂದಿದ್ದಲ್ಲಿ, ಮೂಲ ಸೌಕರ್ಯ ಕಲ್ಪಿಸಲು ಯಾವಾಗ ಕ್ರಮ ಜರುಗಿಸಲಾಗುವುದು?	ಅನುದಾನ ಲಭ್ಯತೆಗೆ ಒಳಪಟ್ಟು ಹಂತ ಹಂತವಾಗಿ ಒದಗಿಸಲು ಕ್ರಮವಹಿಸಲಾಗುವುದು.

ಸಂಖ್ಯೆ: ಇಡಿ 25 ಯುಜಿವಿ2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ).